# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.61(ಎಸ್.ಕೆ ಗಾರ್ಡನ್)

## ವಾರ್ಡ್ ಸಮಿತಿ ಸಭೆ, ದಿನಾಂಕ: 16-07-2022 ರ ಸಭಾ ನಡವಳಿ

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/ 07 / 22-23

ದಿನಾಂಕ: 16-07-2022 ರಂದು ಮಧ್ಯಾಹ್ನ 12.00 ಗಂಟೆಗೆ ವಾರ್ಡ್ ನಂ. 61-ಎಸ್.ಕೆ ಗಾರ್ಡನ್ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಹಾಯಕ ಅಭಿಯಂತರರು ರವರ ವಾರ್ಡ್ ಕಛೇರಿ ಐ.ಟಿ.ಐ ಲೇಔಟ್ ಎಸ್.ಕೆ ಗಾರ್ಡನ್ ವಾರ್ಡ್ ಸಂಖ್ಯೆ 61 ರಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.

| ಕ್ರ.ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | Atif Ahmed | Nodal Officer ward No. 61-S.K Garden & Asst. Executive Engineer, J.C. Nagar Sub-division |
| 2 | Rangappa B G | Asst. Engineer Ward No.61 |
| 3 | Venkatesh | Senior Health Inspector |
| 4 | Harish | JHI Ward No 61 |
| 5 | Srinivas | Senior Vetenary Inspector |
| 6 | Smt: M. Meena | Welfare Tailoring Teacher |
| 7 | Ragavendra N | Tax Inspector |
| 8 | Narasimhaiah | BWSSB |
| 9 | Manohar | JE Bescom |

ಶ್ರೀ ಅತೀಫ್ ಅಹಮ್ಮದ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ದಿನಾಂಕ : 22-06-2022 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ಐ.ಟಿ.ಐ ಲೇಔಟ್‌ನಲ್ಲಿ ಫುಟ್‌ಪಾತ್ ದುರಸ್ಥಿಯ ಬಗ್ಗೆ ಸಾರ್ವಜನಿಕರು ವಾರ್ಡ್ ಕಮಿಟಿ ಸಭೆಯಲ್ಲಿ ತಿಳಿಸಿರುತ್ತಾರೆ. ಸದರಿ ಫುಟ್‌ಪಾತ್ ಸರಿಪಡಿಸಲು 2022-23 ನೇ ಸಾಲಿನ ಪಿ-3726 ರಡಿಯಲ್ಲಿ ರೂ.30.00 ಲಕ್ಷಗಳು ಮಂಜೂರಾಗಿದ್ದು, ಎಸ್.ಕೆ.ಗಾರ್ಡನ್ ಮುಖ್ಯ ರಸ್ತೆ, ಐ.ಟಿ.ಐ ಲೇಔಟ್ ಮುಖ್ಯರಸ್ತೆ ಹಾಗೂ ಅಡ್ಡರಸ್ತೆಗಳಲ್ಲಿ ಫುಟ್‌ಪಾತ್ ಅಭಿವೃದ್ಧಿ ಪಡಿಸಲು ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.
2. ಐ.ಟಿ.ಐ ಲೇಔಟ್‌ನಲ್ಲಿ ರಸ್ತೆಗಳು ಹಾಳಾಗಿರುವ ಬಗ್ಗೆ ಸಾರ್ವಜನಿಕರು ವಾರ್ಡ್ ಕಮಿಟಿ ಸಭೆಯಲ್ಲಿ ತಿಳಿಸಿರುತ್ತಾರೆ. ಸದರಿ ರಸ್ತೆಗಳನ್ನು ಸರಿಪಡಿಸಲು 2022-23 ನೇ ಸಾಲಿನ POW ಅನುದಾನದಡಿ ಕಾಮಗಾರಿ ನಿರ್ವಹಿಸಲು ಚರ್ಚಿಸಲಾಗಿರುತ್ತದೆ.
3. ಡಿ.ಜೆ.ಹಳ್ಳಿ ಮುಖ್ಯರಸ್ತೆಯಲ್ಲಿರುವ ಉರ್ದು ಶಾಲೆಯ ಮುಂಭಾಗದಲ್ಲಿರುವ ಫುಟ್‌ಪಾತ್‌ಅನ್ನು 2022-23 ನೇ ಸಾಲಿನ ಪಿ-3726 ರಡಿಯಲ್ಲಿ ಕಾಮಗಾರಿಯನ್ನು ನಿರ್ವಹಿಸಲು ಚರ್ಚಿಸಲಾಗಿರುತ್ತದೆ.
4. ಐ.ಟಿ.ಐ ಲೇಔಟ್‌ನ ರಸ್ತೆ ಬದಿಗಳಲ್ಲಿ ಬಿದ್ದಿರುವ ಡೆಬ್ರೀಸ್‌ನ್ನು ತೆರವುಗೊಳಿಸಲು ಸೂಚಿಸಲಾಯಿತು.
5. ಐ.ಟಿ.ಐ ಲೇಔಟ್‌ನ 7ನೇ ಮುಖ್ಯರಸ್ತೆಯಲ್ಲಿ ನೀರಿನ ಪೈಪ್‌ಲೈನ್ ಒಡೆದುಹೋಗಿದ್ದು, ತುರ್ತಾಗಿ ಸದರಿ ನೀರಿನ ಪೈಪ್‌ಲೈನ್ ಸರಿಪಡಿಸಲು ಸಂಬಂಧಪಟ BWSSB ಅಧಿಕಾರಿ...

Scanned with CamScanner

7. ವಾರ್ಡ್ ವ್ಯಾಪ್ತಿಯಲ್ಲಿರುವ ಅನಧಿಕೃತ ಬ್ಯಾನರ್. ಫ್ಲೇಕ್ಸ್ ಮತ್ತು ಬಂಟಿಂಗ್ಸ್‌ಗಳನ್ನು ತುರ್ತಾಗಿ ತೆರವುಗೊಳಸಲು ಸೂಚಿಸಲಾಯಿತು.

8. ವಾರ್ಡ್ ವ್ಯಾಪ್ತಿಯಲ್ಲಿದ್ದ ರಸ್ತೆ ಗುಂಡಿಗಳನ್ನು ಮುಚ್ಚಿರುವ ಬಗ್ಗೆ ಹಾಗೂ ಬಾಕಿ ಇರುವ ರಸ್ತೆ ಗುಂಡಿಗಳ ಮುಚ್ಚುವ ಬಗ್ಗೆ ಸಭೆಯಲ್ಲಿ ಮತ್ತೊಮ್ಮೆ ಚರ್ಚಿಸಲಾಗಿರುತ್ತದೆ.

9. ಮಧೀನಾ ಮೊಹಲ್ಲಾ ಕ್ವಾಟ್ರಸ್‌ನ ಅಡ್ಡರಸ್ತೆ ಮತ್ತು ಸುತ್ತಮತ್ತಲ್ಲಿನ ರಸ್ತೆಗಳಲ್ಲಿ ನೀರು ಸರಬರಾಜು ಸರಿಯಾಗಿ ಕಾರ್ಯನಿರ್ವಹಿಸದೇ ಇರುವ ಬಗ್ಗೆ ಸಂಬಂಧಪಟ್ಟ BWSSB ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳಲು ತಿಳಸಲಾಗಿರುತ್ತದೆ.

10. ಡಿ.ಜೆ.ಹಳ್ಳಿ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ರಸ್ತೆ ಮತ್ತು ಚರಂಡಿ ಕಾಮಗಾರಿ ನಿರ್ವಹಿಸಲು ಸಾರ್ವಜನಿಕರು ಸಭೆಯಲ್ಲಿ ಮನವಿ ಮಾಡಿರುತ್ತಾರೆ. ಅದರಂತೆ ಸದರಿ ಕಾಮಗಾರಿಯನ್ನು 2022-23 ನೇ ಸಾಲಿನ ಅನುದಾನ ಅಡಿಯಲ್ಲಿ ಕೈಗೊಳ್ಳಲಾಗುವುದೆಂದು ವಾರ್ಡಿನ ಸಹಾಯಕ ಅಭಿಯಂತರರು ತಿಳಿಸಿರುತ್ತಾರೆ.

11. ವಾರ್ಡ್ ವ್ಯಾಪ್ತಿಯಲ್ಲಿ ಪ್ಲಾಸ್ಟೀಕ್ ಬ್ಯಾನ್ ಮಾಡುವ ಬಗ್ಗೆ ಆರೋಗ್ಯ ಪರಿವೀಕ್ಷಕರ ಜೊತೆ ಚರ್ಚಿಸಿ, ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಲಾಗಿರುತ್ತದೆ.

ಮೇಲ್ಕಂಡ ಸಮಸ್ಯೆಗಳು ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ನೋಡಲ್ ಅಧಿಕಾರಿ ರವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಸಲಾಯಿತು.

(ಅತೀಫ್ ಅಹಮ್ಮದ್)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 61

ಪ್ರತಿಯನ್ನು:

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
07. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಕಛೇರಿ ಕಡತಕ್ಕೆ.

Scanned with CamScanner